(81)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಹೆಚ್.ನರಸಿಂಹಮೂರ್ತಿ, ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ. ಉತ್ತರ ಕನ್ನಡ ಜಿಲ್ಲೆ ಇವರ ಮೇಲಿನ ಶಿಸ್ತು ಕ್ರಮ ಕುರಿತು.

*********

**ಪ್ರಸ್ತಾವನೆ:**

ಶ್ರೀ ಹೆಚ್.ನರಸಿಂಹಮೂರ್ತಿ, ಸಹಾಯಕ ಕೃಷಿ ನಿರ್ದೇಶಕರು, (ವಿಷಯ ತಜ್ಞ) ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು. ರವರು ಈ ಹಿಂದೆ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ಸಹಾಯಕ ಕೃಷಿ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಸಮರ್ಪಕವಾಗಿ ನಿರ್ವಹಣೆ ಮಾಡದೇ ಬೇಜವಾಬ್ದಾರಿತನದಿಂದ ವರ್ತಿಸುತ್ತಾರೆ. ಕಛೇರಿಯ ನೌಕರರು ಮತ್ತು ಸಿಬ್ಬಂದಿಯವರೊಂದಿಗೆ ಅಸಭ್ಯವಾಗಿ ವರ್ತಿಸುವ ಮೂಲಕ ಅವರುಗಳು ಮಾನಸಿಕ ಹಿಂಸೆಗೊಳಗಾಗಲು ಕಾರಣರಾಗಿರುತ್ತಾರೆಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಹಾಗೂ ಉತ್ತರ ಕನ್ನಡ ಜಿಲ್ಲೆ ಉಸ್ತುವಾರಿ ಸಚಿವರು, ಸಿದ್ದಾಪುರಕ್ಕೆ ಭೇಟಿ ನೀಡಿದ ಸಂಧರ್ಭದಲ್ಲಿ ಅಲ್ಲಿನ ಸಾರ್ವಜನಿಕರು ದೂರು ನೀಡಿರುವುದರಿಂದ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಹಾಗೂ ಉತ್ತರ ಕನ್ನಡ ಜಿಲ್ಲೆಯ ಉಸ್ತುವಾರಿ ಸಚಿವರ ಟಿಪ್ಪಣಿಯಂತೆ ಪರಿಶೀಲಿಸಿದ ಸರ್ಕಾರ ಶ್ರೀ ಹೆಚ್. ನರಸಿಂಹಮೂರ್ತಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ ಹಾಲಿ ಸಹಾಯಕ ಕೃಷಿ ನಿರ್ದೇಶಕರು(ವಿತ) ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು. ಇವರ ವಿರುದ್ಧದ ಶಿಸ್ತು ಕ್ರಮವನ್ನು ಕಾಯ್ದಿರಿಸಿ ಇವರನ್ನು ಸೇವೆಯಿಂದ ಅಮಾನತ್ತಿನಲ್ಲಿರಿಸಲು ತೀರ್ಮಾನಿಸಿದೆ. ಆದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 75 ಕೃಪವಿ 2010**
**ಬೆಂಗಳೂರು, ದಿನಾಂಕ: 23-06-2011**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದಾಗಿ ಸರ್ಕಾರವು ಶ್ರೀ ಹೆಚ್.ನರಸಿಂಹಮೂರ್ತಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ. ಉತ್ತರ ಕನ್ನಡ ಜಿಲ್ಲೆ, ಹಾಲಿ ಸಹಾಯಕ ಕೃಷಿ ನಿರ್ದೇಶಕರು (ವಿಷಯ ತಜ್ಞ) ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು. ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10(1)(ಡಿ)ರನ್ವಯ ಈ

--2--

ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಸದರಿ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಂಶ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಹಾಗೂ ಸದರಿ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ಕೇಂದ್ರ ಸ್ಥಾನ ಬಿಡುವಂತಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

22/6

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3. ಜಂಟಿ ಕೃಷಿ ನಿರ್ದೇಶಕರು, ಉತ್ತರ ಕನ್ನಡ ಜಿಲ್ಲೆ ಕಾರವಾರ/ಚಿಕ್ಕಮಗಳೂರು.
4. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
6. ಸಂಬಂಧಿಸಿದ ಅಧಿಕಾರಿಗಳು (ಆಯುಕ್ತರು, ಕೃಷಿ ಇಲಾಖೆ, ಇವರ ಮೂಲಕ)
7. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ.